**All India Radio: Bangalore**
**National Bulletins In Kannada**
**14.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.07.2025 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

- ಕರ್ನಾಟಕದಲ್ಲಿ ನೆನೆಗುದಿಗೆ ಬಿದ್ದಿರುವ ಹಲವು ಹೆದ್ದಾರಿ ಯೋಜನೆಗಳು ೨೦೨೫ ರೊಳಗೆ ಪೂರ್ಣ; ಕೇಂದ್ರ ಸಚಿವ ನಿತಿನ್ ಗಡ್ಕರಿ

- ಆಕ್ಸಿಯಮ್-೪ ಮಿಷನ್; ಅಂತಾರಾಷ್ಟ್ರೀಯ ಬ್ಯಾಹ್ಯಾಕಾಶ ನಿಲ್ದಾಣದಿಂದ ಭೂಮಿಯತ್ತ ಪ್ರಯಾಣ ಆರಂಭಿಸಿದ ಶುಭಾಂಶು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳು

- ಹರಿಯಾಣ, ಗೋವಾಕ್ಕೆ ನೂತನ ರಾಜ್ಯಪಾಲರು ಹಾಗೂ ಲಡಾಖ್‌ಗೆ ನೂತನ ಲೆಫ್ಟಿನೆಂಟ್ ಗವರ್ನರ್ ನೇಮಕ

- ಆಂಡರ್ಸನ್- ತೆಂಡಲ್ಕೂರ್ ಟೆಸ್ಟ್ ಕ್ರಿಕೆಟ್ ಟ್ರೋಫಿ; ಇಂಗ್ಲೆಂಡ್ ನೀಡಿರುವ ೧೯೩ ರನ್‌ಗಳ ಗುರಿ ಬೆನ್ನಟ್ಟಿರುವ ಭಾರತ

**<><*<><>*><>**

ಕರ್ನಾಟಕದ ವಿಕಾಸಕ್ಕೆ ಮುಂದಿನ ೫ ವರ್ಷಗಳಲ್ಲಿ ೫ ಲಕ್ಷ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ಕೇಂದ್ರ ಭೂ ಸಾರಿಗೆ ಹಾಗೂ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ. ೬ ದಶಕಗಳ ಕನಸಾಗಿದ್ದ ಶಿವಮೊಗ್ಗದ ಸಿಗಂದೂರು ಭಾಗದ ೪೦ ಕ್ಕೂ ಹೆಚ್ಚು ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಅಂಬಲಗೋಡು- ಕಳಸವಳ್ಳಿ- ಸಿಗಂಧೂರು ಸೇತುವೆಯನ್ನು ಇಂದು ಉದ್ಘಾಟಿಸಿ ಮಾತನಾಡಿದ ಅವರು, ಇದೊಂದು ಐತಿಹಾಸಿಕ ಸೇತುವೆಯಾಗಿದ್ದು, ಇದರ ಹೆಸರನ್ನು ಸಿಗಂಧೂರು ಚೌಡೇಶ್ವರಿ ದೇವಿ ಸೇತುವೆ ಎಂದು ಪ್ರಕಟಿಸಿದರು. ನಂತರ ಮಾತನಾಡಿದ ಅವರು, ೧೦ ಸಾವಿರ ಕೋಟಿ ಮೊತ್ತದ ಬೆಳಗಾವಿ- ಹುನಗುಂದ- ರಾಯಚೂರು ಚತುಷ್ಪಥ ಕಾಮಗಾರಿ, ಬೆಂಗಳೂರು -ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯ ಸರ್ವಿಸ್ ರಸ್ತೆ, ಬೆಂಗಳೂರು-ಮಂಗಳೂರು ನಡುವಿನ ಶಿರಾಡಿ ಘಾಟ್ ಯೋಜನೆ, ಮೈಸೂರು-ಕೊಡಗು ರಾಷ್ಟ್ರೀಯ ಹೆದ್ದಾರಿ ಯೋಜನೆ ಸೇರಿದಂತೆ ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಹಲವು ಯೋಜನೆಗಳನ್ನು ೨೦೨೫ ರೊಳಗೆ ಪೂರ್ಣಗೊಳಿಸುವ ಭರವಸೆ ನೀಡಿದರು.

ಧ್ವನಿ: ನಿತಿನ್ ಗಡ್ಕರಿ ಕೇಂದ್ರ ಸಚಿವ ( ೩೫ ಸೆಕೆಂಡ್ಸ್ )

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಮ್ಯಾನ್ ಆಫ್ ನ್ಯಾಷನಲ್ ಹೈವೇಸ್ ಎಂಬ ಹೆಸರು ಗಡ್ಕರಿಯವರಿಗೆ ಸೂಕ್ತ ಎಂದು ಬಣ್ಣಿಸಿದರು. ಇದೇ ವೇಳೆ ಸಿಗಂದೂರು ಸೇತುವೆಗಾಗಿ ನಡೆದ ಹೋರಾಟವನ್ನು ಅವರು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಂಸದ ಬಿ.ವೈ.ರಾಘವೇಂದ್ರ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**<><*<><>*><>**

ಭಾರತೀಯ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಸೇರಿದಂತೆ ಆಕ್ಸಿಯಮ್-೪ ಮಿಷನ್‌ನ ನಾಲ್ವರು ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬ್ಯಾಹ್ಯಾಕಾಶ ನಿಲ್ದಾಣದಿಂದ ಭೂಮಿಯತ್ತ ಪ್ರಯಾಣ ಆರಂಭಿಸಿದ್ದಾರೆ. ಸ್ಪೇಸ್‌ಎಕ್ಸ್ ಕಂಪನಿಯು, ಸಾಮಾಜಿಕ ಜಾಲತಾಣದಲ್ಲಿ ಸಿಬ್ಬಂದಿ ಕ್ಯಾಪ್ಸುಲ್ -ಡ್ರ್ಯಾಗನ್ ಅನ್ನು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಬೇರ್ಪಡಿಸಲಾಗಿದೆ ಎಂದು ದೃಢಪಡಿಸಿದೆ. ಡ್ರ್ಯಾಗನ್ ನಾಳೆ ಬೆಳಿಗ್ಗೆ ಕ್ಯಾಲಿಫೋರ್ನಿಯಾ ಕರಾವಳಿಯಲ್ಲಿ ಅಮೆರಿಕಾದ ಕಾಲಮಾನ ರಾತ್ರಿ ೧೦ ಗಂಟೆ ೫ ನಿಮಿಷಕ್ಕೆ ಭೂಮಿಯ ವಾತಾವರಣವನ್ನು ಪ್ರವೇಶಿಸಲಿದೆ.

**ಧ್ವನಿ: ಆಕ್ಸಿಯಂ ಸ್ಪೇಸ್ ( ೨೪ ಸೆಕೆಂಡ್ಸ್)**

ಭೂಮಿಗೆ ಇಳಿದ ನಂತರ, ಗ್ರೂಪ್ ಕ್ಯಾಪ್ಟನ್ ಶುಕ್ಲಾ ಮತ್ತು ಇತರ ಗಗನಯಾತ್ರಿಗಳೊಂದಿಗೆ ಭೂಮಿಯ ಗುರುತ್ವಾಕರ್ಷಣೆಗೆ ಹೊಂದಿಕೊಳ್ಳಲು ಫ್ಲೈಟ್ ಸರ್ಜನ್‌ಗಳ ಮೇಲ್ವಿಚಾರಣೆಯಲ್ಲಿ ೭ ದಿನಗಳ ಪುನರ್ವಸತಿ ಕಾರ್ಯಕ್ರಮಕ್ಕೆ ಒಳಗಾಗುತ್ತಾರೆ. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಮೊದಲ ಭಾರತೀಯ ಮತ್ತು ೧೯೮೪ ರಲ್ಲಿ ಬಾಹ್ಯಾಕಾಶಕ್ಕೆ ಹೋದ ವಿಂಗ್ ಕಮಾಂಡರ್ ರಾಕೇಶ್ ಶರ್ಮಾ ನಂತರ ಗ್ರೂಪ್ ಕ್ಯಾಪ್ಟನ್ ಶುಕ್ಲಾ ಎರಡನೇ ಭಾರತೀಯ ಗಗನಯಾತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಪ್ರಯಾಣದ ಸಮಯದಲ್ಲಿ, ಗ್ರೂಪ್ ಕ್ಯಾಪ್ಟನ್ ಶುಕ್ಲಾ ಭಾರತದ ನಿರ್ದಿಷ್ಟ ಏಳು ಪ್ರಯೋಗಗಳನ್ನು ನಡೆಸಿದರು. ಐಎಸ್‌ಎಸ್‌ನಲ್ಲಿ ತಮ್ಮ ವಿದಾಯ ಭಾಷಣದಲ್ಲಿ, ಗ್ರೂಪ್ ಕ್ಯಾಪ್ಟನ್ ಶುಕ್ಲಾ ತಮ್ಮ ಬಾಹ್ಯಾಕಾಶ ಪ್ರಯಾಣವನ್ನು ಅದ್ಭುತ ಎಂದು ಬಣ್ಣಿಸಿದ್ದಾರೆ. ಐಎಸ್‌ಎಸ್‌ನಲ್ಲಿ ನಿನ್ನೆ ನಡೆದ ವಿದಾಯ ಸಮಾರಂಭದಲ್ಲಿ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು, ಬಾಹ್ಯಾಕಾಶದಿಂದ ಭಾರತವು ಹೆಮ್ಮೆ, ಮಹತ್ವಾಕಾಂಕ್ಷೆ, ನಿರ್ಭೀತಿ ಹಾಗೂ ಆತ್ಮವಿಶ್ವಾಸದಿಂದ ತುಂಬಿ ಕಾಣತ್ತದೆ ಎಂದು ಹೇಳಿದರು. ೧೯೮೪ ರಲ್ಲಿ ಭಾರತದ ಮೊದಲ ಗಗನಯಾತ್ರಿ ರಾಕೇಶ್ ಶರ್ಮಾ ಅವರ ಸಾಂಪ್ರದಾಯಿಕ ಮಾತುಗಳನ್ನು ಪುನರಾವರ್ತಿಸುತ್ತಾ, ಭಾರತವು ಇನ್ನೂ ಮೇಲಿನಿಂದ 'ಸಾರೆ ಜಹಾನ್ ಸೆ ಅಚ್ಚಾ' ಎಂದು ಕಾಣುತ್ತದೆ ಎಂದು ಅವರು ಹೇಳಿದರು. ಶುಕ್ಲಾ ಅವರನ್ನು ಹೊತ್ತೊಯ್ಯುವ ಆಕ್ಸಿಯಮ್ -೪ ಮಿಷನ್ ಜೂನ್ ೨೫ ರಂದು ಐಎಸ್‌ಎಸ್‌ಗೆ ಹೊರಟಿತ್ತು. ಶುಕ್ಲಾ ಜೊತೆಗೆ, ಈ ಕಾರ್ಯಾಚರಣೆಯಲ್ಲಿ ಮೂವರು ಗಗನಯಾತ್ರಿಗಳು ಇದ್ದರು - ಅಮೆರಿಕಾದ ಕಮಾಂಡರ್ ಪೆಗ್ಗಿ ವಿಟ್ಸನ್ ಮತ್ತು ಮಿಷನ್ ತಜ್ಞರಾದ ಪೋಲೆಂಡ್ ಮತ್ತು ಹಂಗೇರಿಯ ಸ್ಲಾವೋಸ್ಜ್ ಉಜ್ನಾನ್ಸ್ಕಿ-ವಿಸ್ನಿವ್ಸ್ಕಿ ಮತ್ತು ಟಿಬೋರ್ ಕಪು ಅವರನ್ನು ಹೊತ್ತ ಸ್ಪೇಸ್‌ಎಕ್ಸ್ ಫಾಲ್ಕನ್ ೯ ಅನ್ನು ಫ್ಲೋರಿಡಾದ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆ ಮಾಡಲಾಯಿತು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಹರಿಯಾಣ ಮತ್ತು ಗೋವಾಕ್ಕೆ ನೂತನ ರಾಜ್ಯಪಾಲರನ್ನು ಮತ್ತು ಲಡಾಖ್‌ಗೆ ನೂತನ ಲೆಫ್ಟಿನೆಂಟ್ ಗವರ್ನರ್ ಅವರನ್ನು ನೇಮಿಸಿದ್ದಾರೆ. ಮಾಜಿ ನಾಗರಿಕ

ವಿಮಾನಯಾನ ಸಚಿವ ಪುಸಪತಿ ಅಶೋಕ್ ಗಜಪತಿ ರಾಜು ಅವರನ್ನು ಗೋವಾ ರಾಜ್ಯಪಾಲರನ್ನಾಗಿ ಹಾಗೂ ಪ್ರೊಫೆಸರ್ ಆಶಿಮ್ ಕುಮಾರ್ ಘೋಷ್ ಅವರನ್ನು ಹರಿಯಾಣ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಕವಿಂದರ್ ಗುಪ್ತಾ ಅವರನ್ನು ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಿಸಲಾಗಿದೆ. ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಆಗಿದ್ದ ನಿವೃತ್ತ ಬ್ರಿಗೇಡಿಯರ್ ಡಾ.ಬಿ.ಡಿ.ಮಿಶ್ರಾ ಅವರ ರಾಜೀನಾಮೆಯನ್ನು ರಾಷ್ಟ್ರಪತಿಗಳು ಅಂಗೀಕರಿಸಿದ್ದಾರೆ.

**<><*<><>*><>**

ಹಿರಿಯ ಬಹುಭಾಷಾ ನಟಿ ಬಿ.ಸರೋಜಾದೇವಿ ಇಂದು ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಇವರಿಗೆ ೮೭ ವರ್ಷ ವಯಸ್ಸಾಗಿತ್ತು. ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ೭ ದಶಕಗಳ ಕಾಲ ಚಿತ್ರರಂಗದಲ್ಲಿ ಸೇವೆ ಸಲ್ಲಿಸಿದ್ದ ಇವರು, ಅಭಿನಯ ಸರಸ್ವತಿ ಎಂದು ಖ್ಯಾತರಾಗಿದ್ದರು. ಕನ್ನಡ ಮಾತ್ರವಲ್ಲದೇ ಅವರು ತಮಿಳು, ತೆಲುಗು, ಹಿಂದಿ ಸಿನಿಮಾ ರಂಗಕ್ಕೂ ಅಮೂಲ್ಯ ಕೊಡುಗೆ ನೀಡಿದ್ದು, ೨೦೦ಕ್ಕೂ ಅಧಿಕ ಚಲನಚಿತ್ರಗಳಲ್ಲಿ ನಟಿಸಿ, ಜನಮನ ಗೆದ್ದಿದ್ದರು. ಅಪ್ರತಿಮ ನಟರಾದಂತಹ ಡಾ.ರಾಜಕುಮಾರ್, ಕಲ್ಯಾಣಕುಮಾರ್ ಸೇರಿದಂತೆ ಅನೇಕರೊಂದಿಗೆ ಅಮರಶಿಲ್ಪಿ ಜಕಣಾಚಾರಿ, ಭಾಗ್ಯವಂತರು, ಬಬ್ರುವಾಹನ ಮತ್ತು ಕಥಾಸಂಗಮ ಚಲನಚಿತ್ರಗಳಲ್ಲಿ ಅಭಿನಯಿಸಿ ಮೆಚ್ಚುಗೆಗೆ ಪಾತ್ರರಾಗಿದ್ದರು. ಭಾರತೀಯ ಚಿತ್ರರಂಗಕ್ಕೆ ಅವರು ನೀಡಿದಂತ ಅಮೂಲ್ಯ ಕೊಡುಗೆಗಳಿಗಾಗಿ ಅವರಿಗೆ ಭಾರತ ಸರ್ಕಾರ ಪದ್ಮಭೂಷಣ ಹಾಗೂ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ೬೦ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗಿದೆ. ಕರ್ನಾಟಕ ಸರ್ಕಾರ ಡಾ.ರಾಜಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, ತಮಿಳುನಾಡು ಸರ್ಕಾರ ಕಲೈಮ ಮಣಿ ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಆಂಧ್ರಪ್ರದೇಶ ಸರ್ಕಾರ ಎನ್‌ಟಿಆರ್ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದೆ. ಬಿ.ಸರೋಜಾದೇವಿ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಭಾರತೀಯ ಚಿತ್ರರಂಗ ಮತ್ತು ಸಂಸ್ಕೃತಿಯಲ್ಲಿ ಬಿ.ಸರೋಜಾದೇವಿ ಆದರ್ಶಪ್ರಾಯ ವ್ಯಕ್ತಿತ್ವ ಹೊಂದಿದ್ದರು. ವಿವಿಧ ಭಾಷೆಗಳ ಚಿತ್ರಗಳಲ್ಲಿ ಅವರು ನಿಭಾಯಿಸಿದ್ದ ವೈವಿಧ್ಯಮಯ ಪಾತ್ರಗಳು ಎಂದಿಗೂ ಮರೆಯದ ಛಾಪನ್ನು ಮೂಡಿಸಿವೆ ಎಂದು ತಿಳಿಸಿದ್ದಾರೆ. ಬಿ.ಸರೋಜಾದೇವಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

**<><*<><>*><>**

ಭಾರತ-ಚೀನಾ ಸಂಬಂಧಗಳು ಕ್ರಮೇಣ ಸಕಾರಾತ್ಮಕ ದಿಕ್ಕಿನಲ್ಲಿ ಸಾಗುತ್ತಿವೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಬೀಜಿಂಗ್‌ನಲ್ಲಿಂದು ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗಿನ ಸಭೆಯಲ್ಲಿ ಹೇಳಿಕೆ ನೀಡಿರುವ ಡಾ.ಎಸ್.ಜೈಶಂಕರ್, ಕಳೆದ ಒಂಬತ್ತು ತಿಂಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಸಾಮಾನ್ಯಗೊಳಿಸುವ ನಿಟ್ಟಿನಲ್ಲಿ ಉಭಯ ದೇಶಗಳು ಉತ್ತಮ ಪ್ರಗತಿ ಸಾಧಿಸಿವೆ ಎಂದು ಹೇಳಿದರು. ಇದಕ್ಕೂ ಮೊದಲು, ವಿದೇಶಾಂಗ ಸಚಿವರು ಇಂದು ಬೀಜಿಂಗ್‌ನಲ್ಲಿ ಚೀನಾದ ಉಪಾಧ್ಯಕ್ಷ ಹಾನ್ ಝೆಂಗ್ ಅವರೊಂದಿಗೆ ಸಭೆ ನಡೆಸಿದರು. ನಾಳೆ ಟಿಯಾಂಜಿನ್ ನಗರದಲ್ಲಿ ನಡೆಯಲಿರುವ ಎಸ್‌ಸಿಒ ವಿದೇಶಾಂಗ ಸಚಿವರ ಸಭೆಯಲ್ಲಿ ಡಾ.ಎಸ್.ಜೈಶಂಕರ್ ಭಾಗವಹಿಸಲಿದ್ದಾರೆ.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಎರಡು ದಿನಗಳ ಕಾಲ ತಮ್ಮ ತವರು ರಾಜ್ಯವಾದ ಒಡಿಶಾಗೆ ಭೇಟಿ ನೀಡಲು ಇಂದು ಮಧ್ಯಾಹ್ನ ಭುವನೇಶ್ವರಕ್ಕೆ ಆಗಮಿಸಿದರು. ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರಾಷ್ಟ್ರಪತಿಗಳನ್ನು ಒಡಿಶಾ ರಾಜ್ಯಪಾಲ ಹರಿ ಬಾಬು ಕಂಭಂಪತಿ, ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಇತರ ಹಿರಿಯ ಗಣ್ಯರು ಮತ್ತು ಹಲವಾರು ಸಾಂಪ್ರದಾಯಿಕ ಮತ್ತು ಜಾನಪದ ನೃತ್ಯಗಾರರು ಆತ್ಮೀಯವಾಗಿ ಸ್ವಾಗತಿಸಿದರು.

**<><*<><>*><>**

ಲಂಡನ್‌ನ ಐತಿಹಾಸಿಕ ಲಾರ್ಡ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಆಂಡರ್ಸನ್ ತೆಂಡಲ್ಕೂರ್ ಟ್ರೋಫಿಯ ಟೆಸ್ಟ್ ಕ್ರಿಕೆಟ್ ಸರಣಿಯ ಮೂರನೇ ಪಂದ್ಯದ ಕೊನೆಯ ದಿನದಾಟವಾದ ಇಂದು ಇಂಗ್ಲೆಂಡ್ ನೀಡಿರುವ ೧೯೩ ರನ್‌ಗಳು ಗುರಿಯನ್ನು ಬೆನ್ನಟ್ಟಿರುವ ಭಾರತ, ಇತ್ತೀಚಿನ ವರದಿಯಂತೆ ೮ ವಿಕೆಟ್‌ಗಳಿಗೆ ೧೩೫ ರನ್ ಗಳಿಸಿ ಆಡುತ್ತಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>**